ಕರ್ನಾಟಕ ಸರಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಬೀದರ

ಸಂಖ್ಯೆ:ಜಿ2/ಖಾಪ್ರಾಶಾ/ಅನುಮತಿ/66/2012-13/943 ದಿನಾಂಕ:28-04-2012

## ನಮೂನೆ-2

ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: 66/2012-13

ಬೀದರ ಬಸವತತ್ವ ಎಜ್ಯುಕೇಶನ್ ಟ್ರಸ್ಟ (ರಿ) ವಿದ್ಯಾನಗರ ಕಾಲೋನಿ ತಾ:ಜಿ: ಬೀದರ. ಗವರ್ನಿಂಗ್ ಕೌನ್ಸಲ್ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ1-1995 ಸೆಕ್ಷನ 31 ರಂತೆ ಈ ದಿನಾಂಕದಿಂದ 28-04-2012 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1 | ನೊಂದಣಿ ಸಂಖ್ಯೆ | 66/2012-13 |
| 2 | ಶಿಕ್ಷಣ ಸಂಸ್ಥೆಯ ವಿವರ | ಬೀದರ ಬಸವತತ್ವ ಎಜ್ಯುಕೇಶನ್ ಟ್ರಸ್ಟ (ರಿ) ವಿದ್ಯಾನಗರ ಕಾಲೋನಿ ತಾ:ಜಿ: ಬೀದರ. |
| 3 | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಬಿ.ಕೆ.ಇಂಟರನ್ಯಾಷನಲ್ ಕಿರಿಯ ಪ್ರಾಥಮಿಕ ಶಾಲೆ ನಾವದಗೇರಿ ಚಿಕ್ಕಪೇಟ್-ಶಾಮರಾಜಪೂರ ರಸ್ತೆ ಬೀದರ |
| 4 | ಅನುಮತಿ ನೀಡಿದ ತರಗತಿ | 1 ರಿಂದ 5 ನೇ ತರಗತಿ |
| 5 | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣೀಕ ವರ್ಷ | 1 ನೇ ತರಗತಿ 2012-13<br>2 ನೇ ತರಗತಿ 2013-14<br>3 ನೇ ತರಗತಿ 2014-15<br>4 ನೇ ತರಗತಿ 2015-16<br>5 ನೇ ತರಗತಿ 2016-17 |
| 6 | ಅನುಮತಿ ನೀಡದ ಮಾಧ್ಯಮ | ಕನ್ನಡ ಮಾಧ್ಯಮ |
| 7 | ಶುಲ್ಕ ಪಾವತಿ ಮಾಡಿರುವ ವಿವರ | 1.ಹುಂಡಿ ಸಂಖ್ಯೆ :008739<br>2.ದಿನಾಂಕ: :28-10-2012<br>3.ಮೊತ್ತ :5000.00 |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 66 ಪುಟ ಸಂಖ್ಯೆ : 27 ಮತ್ತು 28 ವ್ಯಾಲ್ಯೂಂ ಸಂಖ್ಯೆ 02 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ನೊಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೊಂದಣಿ) ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1) ಈ ನೊಂದಣಿಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.
2) ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3) ಶಾಲಾ ನಿವೇಶನದ ವಿಸ್ತೀರ್ಣ,ಕಟ್ಟಡ,ಪಾಠೋಪಕರಣ,ಪೀಠೋಪಕರಣಗಳು,ಸಿಬ್ಬಂದಿ ವರ್ಗ ಆರ್ಥಿಕ ಅನೂಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4) ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5) ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6) ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯವರು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು,ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಸರಕಾರದ ಪೂರ್ವಾನುಮತಿ ಇಲ್ಲದೆ ಸ್ಥಳಾಂತರಿಸತಕ್ಕದ್ದಲ್ಲ.
7) ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳನ್ನು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು.ಕರ್ನಾಟಕ ಶಿಕ್ಷಣ ಮಸೂದೆ 1983 (ಅಕ್ಟ- ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8) ಈ ಪ್ರಾಥಮಿಕ ಶಾಲಾ ನೊಂದಣಿಯು ಸರಕಾರಿ ಅಧಿಸೂಚನೆ ಸಂಖ್ಯೆ:ಇಡಿ:175 ಪಿ.ಎಂ.ಸಿ.95 ದಿನಾಂಕ:07-09-1998 ಮತ್ತು 29-12-1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿ (Permanently Without Aid) ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದೂ ರೂ 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣಿಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಅವುಗಳಿಗೆ ಬದ್ಧರಾಗಿರತಕ್ಕದ್ದು.

10) ಇಲಾಖೆ ಹಾಗೂ ಸರಕಾರ ನಿಗದಿಪಡಿಸಿದ ಪಠ್ಯ ಪುಸ್ತಕ,ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

11) ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995 ) ರ ಪ್ರಕಾರ ಸೆಕ್ಷನ 36 ರಿಂದ 39 ರಿತ್ಯಾದ ಹಾಗೂ ಇಡಿ 131 ವಿವಧ 98 ಬೆಂಗಳೂರು ದಿನಾಂಕ:04-11-1999 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆ ಗಾಗಿ ಅರ್ಜಿ ಸಲ್ಲಿಸತಕ್ಕದ್ದು.

12) ಶಾಲೆಯನ್ನು ಪ್ರಾರಂಬಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13) ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

14) ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

15) ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

16) ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

17) ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

18) ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳೊಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೆ ರದ್ದಾಗುವುದು.

19) ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು. (ಸೇವಾ ಭದ್ರತೆ ನಿಯಮ ತಪ್ಪದೆ ಪಾಲಿಸತಕ್ಕದ್ದು)

20) 2012-13 ನೇ ಸಾಲಿಗೆ 1ರಿಂದ 5 ನೇ ತರಗತಿ ಪ್ರಾರಂಭಿಸಲು ನೊಂದಾಯಿಸಿರುವುದರಿಂದ 2.3.4 ಮತ್ತು 5 ನೇ ತರಗತಿಯನ್ನು ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ಪ್ರಾರಂಭಿಸುವುದು.

21) ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೊಂದಣಿಯನ್ನು ರದ್ದು ಪಡಿಸಲಾಗುವುದು.

22) ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.

23) ವಿದ್ಯಾರ್ಥಿ/ವಿದ್ಯಾರ್ಥಿನಿಯವರಿಗೆ ಪ್ರತ್ಯೇಕ ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸುವುದು.

(ಹೆಚ್.ಆರ್.ಬಸಪ್ಪ)
ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ.

ಗೆ,
ಅಧ್ಯಕ್ಷರು/ಕಾರ್ಯದರ್ಶಿಗಳು
ಬೀದರ ಬಸವತತ್ವ ಎಜ್ಯುಕೇಶನ್ ಟ್ರಸ್ಟ (ರಿ)
ವಿದ್ಯಾನಗರ ಕಾಲೋನಿ ತಾ:ಜಿ: ಬೀದರ